# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:– ಧಾರವಾಡ ಕೃಷಿ ವಿಶ್ವ ವಿದ್ಯಾನಿಲಯದಲ್ಲಿ ಕೃಷಿ ಇಲಾಖೆ ವಿಸ್ತರಣಾ ಅಧಿಕಾರಿಗಳಿಗೆ "ಬುನಾದಿ ತರಬೇತಿ"( **Foundation Course**) ಏರ್ಪಡಿಸುವ ಬಗ್ಗೆ.

ಕೃಷಿ ಆಯುಕ್ತರ ಕಛೇರಿ
2839
7 JAN 2014
ಶೇಷಾದ್ರಿ ರಸ್ತೆ, ಬೆಂಗಳೂರು

**ಸರ್ಕಾರ ಆದೇಶ ಸಂಖ್ಯೆ: ಕೃಇ/156/ಕೃಯೋಕಾ/2013 ಬೆಂಗಳೂರು,**
**ದಿನಾಂಕ: 04-01-2014**

ಉಲ್ಲೇಖ:– 1.ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ದಿನಾಂಕ 26.08.2013ರಂದು ನಡೆದ ಸಭಾ ನಡವಳಿಗಳು.
2.ಕೃಷಿ ನಿರ್ದೇಶಕರ ಪ್ರಸ್ತಾವನೆ ಸಂ.ತರಬೇತಿ/ತಾಂ2/42/ಅ.ತ/2013–14 ದಿ.9.12.2013

**ಪ್ರಸ್ತಾವನೆ:–**

ಮೇಲೆ ಓದಲಾದ (1)ರ ದಿ: 26–08–2013 ರಂದು ನಡೆದ ಮಾನ್ಯ ಕೃಷಿ ಸಚಿವರ ಅಧ್ಯಕ್ಷತೆಯಲ್ಲಿ ನಡೆದ ಸಭೆಯಲ್ಲಿ ಕೃಷಿ ವಿಶ್ವ ವಿದ್ಯಾನಿಲಯಗಳು, ಕೃಷಿ ವಿಸ್ತರಣಾ ಸುಧಾರಣೆ ಕುರಿತಾಗಿ ಕ್ಷೇತ್ರ ಅಧ್ಯಯನ ಕೈಗೊಂಡು, ಅಧ್ಯಯನದ ಫಲಿತಾಂಶಗಳನ್ನು ಮಂಡಿಸಿದ್ದು ಅದರಂತೆ, ಕೃಷಿ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅಧಿಕಾರಿಗಳಿಗೆ ವೃತ್ತಿ ಸಾಮರ್ಥ್ಯ ಬಲವರ್ಧನೆಗಾಗಿ ಕೃಷಿ ವಿಶ್ವ ವಿದ್ಯಾನಿಲಯಗಳಲ್ಲಿ ಒಂದು ವಾರದ ಬುನಾದಿ ತರಬೇತಿ (Foundation Course) ಆಯೋಜಿಸಲು ನಿರ್ಣಯಿಸಲಾಗಿರುತ್ತದೆ.

ಮೇಲೆ ಓದಲಾದ (2)ರ ಕೃಷಿ ನಿರ್ದೇಶಕರ ಪ್ರಸ್ತಾವನೆಯಲ್ಲಿ 2013–14ನೇ ಸಾಲಿನಲ್ಲಿ ಈಗಾಗಲೇ ಅನುಮೋದಿತಗೊಂಡಿರುವ ಬೇಸಾಯ ಸಂಬಂಧಿತ ಚಟುವಟಿಕೆಗಳು ರಾಜ್ಯವಲಯ– ಲೆಕ್ಕ ಶೀರ್ಷಿಕೆ 2401–00–109–0–21 ಉಪ ಲೆಕ್ಕ ಶೀರ್ಷಿಕೆ 059 ರಡಿ (ವಿಸ್ತರಣಾಧಿಕಾರಿಗಳು ಮತ್ತು ರೈತರ ತರಬೇತಿ ಕಾರ್ಯಕ್ರಮ) ಯೋಜನೆಯಡಿಯಲ್ಲಿ ಒದಗಿಸಿಕೊಂಡಿರುವ ರೂ.290.00 ಲಕ್ಷಗಳ ಅನುದಾನದಲ್ಲಿ ಕೃಷಿ ಇಲಾಖೆಯ ವಿಸ್ತರಣಾಧಿಕಾರಿಗಳಿಗೆ ಬುನಾದಿ ತರಬೇತಿ ವೆಚ್ಚ ಭರಿಸಬಹುದಾಗಿದೆ. ಇಲಾಖೆಯ ಅಧಿಕಾರಿಗಳನ್ನು ತರಬೇತಿಗೊಳಿಸಲು ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇಲ್ಲಿ ಆಯೋಜಿಸಿರುವ ತರಬೇತಿಗೆ ರೂ.24.30 ಲಕ್ಷಗಳನ್ನು Grant-in-aid ಬಿಲ್ಲಿನ ಮೂಲಕ ಸೆಳೆದು ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ನೀಡಲು ಕೃಷಿ ನಿರ್ದೇಶಕರಿಗೆ ಅಧಿಕಾರ ನೀಡಿ ಸರ್ಕಾರದ ಆದೇಶ ಹೊರಡಿಸುವಂತೆ ಕೋರಲಾಗಿದೆ.

ಕೃಷಿ ನಿರ್ದೇಶಕರು ಸಲ್ಲಿಸಿರುವ ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ ಈ ಕೆಳಕಂಡಂತೆ ಆದೇಶ ಹೊರಡಿಸಿದೆ.

## ಆದೇಶ

ಪ್ರಸ್ತಾವನೆಯಲ್ಲಿ ವಿವರಿಸಿದ ಕಾರಣಗಳ ಹಿನ್ನೆಲೆಯಲ್ಲಿ, 2013–14ನೇ ಸಾಲಿನಲ್ಲಿ ಈಗಾಗಲೇ ಅನುಮೋದಿತಗೊಂಡಿರುವ ಬೇಸಾಯ ಸಂಬಂಧಿತ ಚಟುವಟಿಕೆಗಳು ರಾಜ್ಯವಲಯ– ಲೆಕ್ಕ ಶೀರ್ಷಿಕೆ 2401–00–109–0–21 ಉಪ ಲೆಕ್ಕ ಶೀರ್ಷಿಕೆ 059 ರಡಿ (ವಿಸ್ತರಣಾಧಿಕಾರಿಗಳು ಮತ್ತು ರೈತರ ತರಬೇತಿ ಕಾರ್ಯಕ್ರಮ) ಯೋಜನೆಯಡಿಯಲ್ಲಿ ಒದಗಿಸಿಕೊಂಡಿರುವ ರೂ.290.00 ಲಕ್ಷಗಳಲ್ಲಿ ಈಗಾಗಲೇ ಬಿಡುಗಡೆ ಮಾಡಿರುವ ಅನುದಾನದಲ್ಲಿ ಇಲಾಖೆಯ ಅಧಿಕಾರಿಗಳನ್ನು ತರಬೇತಿಗೊಳಿಸಲು ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇಲ್ಲಿ ಆಯೋಜಿಸಿರುವ ತರಬೇತಿಗೆ ರೂ.24.30 ಲಕ್ಷಗಳನ್ನು (ಇಪ್ಪತ್ತಾಲ್ಕು ಲಕ್ಷ ಮೂವತ್ತು ಸಾವಿರ ರೂಪಾಯಿಗಳು ಮಾತ್ರ) Grant-in-aid ಬಿಲ್ಲಿನ ಮೂಲಕ ಸೆಳೆದು ಕೃಷಿ ವಿಶ್ವವಿದ್ಯಾಲಯ, ಧಾರವಾಡ ಇವರಿಗೆ ನೀಡಲು ಕೃಷಿ ನಿರ್ದೇಶಕರಿಗೆ ಅಧಿಕಾರ ನೀಡಿ ಆದೇಶಿಸಿದೆ.

ADD(HR)

ಈ ಆದೇಶವನ್ನು ಆರ್ಥಿಕ ಇಲಾಖೆಯ ಆದೇಶ ಸಂ: ಎಫ್‌ಡಿ/01/ಟಿಎಫ್‌ಪಿ/2002, ದಿ: 20–01–2003 ರನ್ವಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾದ ಅಧಿಕಾರದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ್ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ,
ಕೃಷಿ ಇಲಾಖೆ

ಇವರಿಗೆ:

1. ಪ್ರಧಾನ ಮಹಾಲೇಖಪಾಲರು, (ಜಿ & ಎಸ್ ಎಸ್ ಎ) ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು–560001.
2. ಪ್ರಧಾನ ಮಹಾಲೇಖಪಾಲರು, (ಇ & ಆರ್ ಎಸ್ ಎ) ಕರ್ನಾಟಕ ಹೊಸ ಕಟ್ಟಡ, "ಆಡಿಟ್ ಭವನ", ಬೆಂಗಳೂರು–560001.
3. ಪ್ರಧಾನ ಮಹಾಲೇಖಪಾಲರು, (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಬೆಂಗಳೂರು–01.
4. ಕುಲಪತಿಗಳು, ಕೃಷಿ ವಿಶ್ವವಿದ್ಯಾಲಯ, ಧಾರವಾಡ.
5. ಕೃಷಿ ಆಯುಕ್ತರು / ನಿರ್ದೇಶಕರು, ಶೇಷಾದ್ರಿ ರಸ್ತೆ, ಬೆಂಗಳೂರು.
7. ನಿರ್ದೇಶಕರು, ಹುಜೂರು ಖಜಾನೆ, ಬೆಂಗಳೂರು.
8. ಜಂಟಿ ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು–02.
9. ಶಾಖೆಯ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.

ಮಾಹಿತಿಗಾಗಿ ಪ್ರತಿ.

1. ಮಾನ್ಯ ಕೃಷಿ ರಾಜ್ಯ ಸಚಿವರ ಆಪ್ತ ಕಾರ್ಯದರ್ಶಿ, ವಿಕಾಸಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು, ಕೃಷಿ ಇಲಾಖೆ, ಬೆಂಗಳೂರು.
3. ಸರ್ಕಾರದ ಉಪ ಕಾರ್ಯದರ್ಶಿ–1ರವರ ಆಪ್ತ ಸಹಾಯಕರು, ಕೃಷಿ ಇಲಾಖೆ, ಬೆಂಗಳೂರು.